**ಸಾಕ್ಷಿಯನ್ನು ದಿಃ 17.02.2026 ರಂದು ಕರೆಸಿ ಪ್ರಮಾಣವಚನ ಭೋದಿಸಲಾಯಿತು.**

**ಪಾಟೀ ಸವಾಲುಃ ಪ್ರತಿವಾದಿಗಳ ಪರ ಶ್ರೀ ಬಿ.ಎಸ್.ವೈ ವಕೀಲರಿಂದಃ-**

1 ರಿಂದ 3 ನೇ ಪ್ರತಿವಾದಿಗಳಿಗೆ ಸಾಲ ಮಂಜೂರಾಗುವ ಸಮಯದಲ್ಲಿ ನಾನು ಬ್ಯಾಂಕ್ ಮ್ಯಾನೇಜರ್ ಆಗಿ ಇರಲಿಲ್ಲ. ಈ ಕೇಸ್ ನಲ್ಲಿ ಪ್ರತಿವಾದಿಗಳು ಸಾಲ ತೆಗೆದುಕೊಂಡ ಬಗ್ಗೆ ಖುದ್ದು ಮಾಹಿತಿ ಇಲ್ಲ, ದಾಖಲೆಗಳ ಆಧಾರದ ಮೇಲೆ ಸಾಕ್ಷಿ ಹೇಳುತ್ತಿದ್ದೇನೆ. ಸಾಲ ತೆಗೆದುಕೊಂಡ ನಂತರ ಪ್ರತಿವಾದಿಗಳು ಸಾಲದ ಬಾಬ್ತು ಮರು ಪಾವತಿ ಮಾಡಿರುತ್ತಾರೆ ಎಂದರೆ ಪೂರಾ ಮಾಡಿರುವುದಿಲ್ಲ ಎನ್ನುತ್ತಾರೆ. ಅವರು ಕಟ್ಟಿರುವಂತಹ ಹಣವನ್ನು ಕೇವಲ ಬಡ್ಡಿಗಾಗಿ ಮಾತ್ರ ತೆಗೆದುಕೊಳ್ಳಲಾಗಿದೆ ಎಂದರೆ ಸರಿಯಲ್ಲ, ಅಸಲು ಮತ್ತು ಬಡ್ಡಿ ಎರಡಕ್ಕೂ ಜಮಾ ಮಾಡಲಾಗಿದೆ ಎನ್ನುತ್ತಾರೆ.

**ಈ ಹಂತದಲ್ಲಿ ಪ್ರಕರಣವನ್ನು ರಾಜಿ ಮಾಡಿಕೊಳ್ಳುವುದಾಗಿ ತಿಳಿಸಿ ಕಾಲಾವಕಾಶ ಕೋರಿದ್ದು ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇದೆ.,

(ಭಾಗ್ಯಮ್ಮ)
1 ನೇ ಹೆಚ್ಚುವರಿ ಹಿರಿಯ ಸಿವಿಲ್ ಜಡ್ಜ್
ಮತ್ತು ಜೆ.ಎಂ.ಎಫ್.ಸಿ.,ಹುಣಸೂರು.